**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆಯ ಆವರಣದಲ್ಲಿರುವ ಗುಡಿಸಲು ವಾಸಿಗಳನ್ನು ತೆರವುಗೊಳಿಸಿ ಕೂಡ್ಲು ಗ್ರಾಮದ ಸರ್ವೆ ನಂ. 148 ರಲ್ಲಿ ನಿರ್ಮಿಸಿರುವ ಮನೆಗಳಿಗೆ ಸ್ಥಳಾಂತರಿಸಲು ತಗಲುವ ವೆಚ್ಚಕ್ಕೆ **ಅನುದಾನ ಬಿಡುಗಡೆ** ಮಾಡುವ ಬಗ್ಗೆ.

---

**ಓದಲಾಗಿದೆ:**

1. ಸರ್ಕಾರದ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ಇವರ ಅಧ್ಯಕ್ಷತೆಯಲ್ಲಿ ದಿನಾಂಕ 28.06.2013 ರಂದು ಜರುಗಿದ ಸಭೆಯ ನಡವಳಿಗಳು.
2. ನಿರ್ದೇಶಕರು, ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಎಸ್‌ಡಿಎಸ್/ಅಭಿವೃದ್ಧಿ/17/2013-14, ದಿನಾಂಕ 30.07.2013.

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ನಡವಳಿಯಲ್ಲಿ ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಆವರಣದಲ್ಲಿರುವ ಗುಡಿಸಲು ವಾಸಿಗಳನ್ನು ತೆರವುಗೊಳಿಸಲು ತಗಲಬಹುದಾದ ಅಂದಾಜು ವೆಚ್ಚದ ಪಟ್ಟಿಯನ್ನು ತಯಾರಿಸಿ ಸಲ್ಲಿಸಲು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಸೂಚಿಸಲಾಗಿದ್ದು, ಇದಕ್ಕೆ ತಗಲುವ ವೆಚ್ಚವನ್ನು ಎಸ್.ಡಿ.ಎಸ್. ಕ್ಷಯ ರೋಗ ಮತ್ತು ರಾಜೀವ್‌ಗಾಂಧಿ ಎದೆ ರೋಗಗಳ ಸಂಸ್ಥೆ ಹಾಗೂ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಭರಿಸುವಂತೆ ತಿಳಿಸಲಾಗಿದೆ.

ನಿರ್ದೇಶಕರು, ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ಬೆಂಗಳೂರು ಇವರು ರಿಟ್ ಅರ್ಜಿ ಸಂಖ್ಯೆ:10541, 10635-638/2013 (LB-RES) ರಲ್ಲಿ ಗೌರವಾನ್ವಿತ ರಾಜ್ಯ ಉಚ್ಛ ನ್ಯಾಯಾಲಯವು ದಿನಾಂಕ 15.07.2013 ರಂದು ನೀಡಿದ ಆದೇಶದ ಮೇರೆಗೆ ತಮ್ಮ ಸಂಸ್ಥೆಯ ಆವರಣದಲ್ಲಿರುವ ಗುಡಿಸಲು ವಾಸಿಗಳನ್ನು ತೆರವುಗೊಳಿಸುವ ಸಲುವಾಗಿ ದಿನಾಂಕ 28.06.2013 ರಂದು ಜರುಗಿದ ಸಭೆಯಲ್ಲಿ ಕೈಗೊಂಡ ನಿರ್ಣಯದನ್ವಯ ಸದರಿ ಸಂಸ್ಥೆಯು ಗುಡಿಸಲು ವಾಸಿಗಳನ್ನು ತೆರವುಗೊಳಿಸಲು ತಗಲುವ ಅಂದಾಜು ವೆಚ್ಚಕ್ಕೆ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಅಂದಾಜು ಪಟ್ಟಿಯನ್ನು ಸಲ್ಲಿಸುವಂತೆ ತಿಳಿಸಲಾಗಿದ್ದು, ಅದರಂತೆ, ಸದರಿ ಮಂಡಳಿಯು ರೂ.22,10,000/- ಗಳ ಅಂದಾಜು ಪಟ್ಟಿಯನ್ನು ಸಲ್ಲಿಸಿರುತ್ತದೆಂದು ತಿಳಿಸುತ್ತಾ, ಗೌರವಾನ್ವಿತ ರಾಜ್ಯ ಉಚ್ಛ ನ್ಯಾಯಾಲಯದ ಆದೇಶದನ್ವಯ ತಮ್ಮ ಸಂಸ್ಥೆಯ ಆವರಣದಲ್ಲಿರುವ ಗುಡಿಸಲು ವಾಸಿಗಳನ್ನು ತೆರವುಗೊಳಿಸಿ ಕೂಡ್ಲು ಗ್ರಾಮದ ಸರ್ವೆ ನಂ.148 ರಲ್ಲಿ ನಿರ್ಮಿಸಿರುವ ಮನೆಗಳಿಗೆ ಸ್ಥಳಾಂತರಿಸಲು ತಗಲುವ ವೆಚ್ಚ ರೂ.22.10.000/- ಗಳನ್ನು ಲೆಕ್ಕಶೀರ್ಷಿಕೆ 4210 (ಯೋಜನೆ) ಅಡಿಯಲ್ಲಿ ಒದಗಿಸಿರುವ ಅನುದಾನದಿಂದ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಹಾಗೂ ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಗೌರವಾನ್ವಿತ ರಾಜ್ಯ ಉಚ್ಚ ನ್ಯಾಯಾಲಯವು ದಿನಾಂಕ 15.07.2013 ರಂದು ನೀಡಿದ ಆದೇಶದ ಮೇರೆಗೆ ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಆವರಣದಲ್ಲಿರುವ ಗುಡಿಸಲು ವಾಸಿಗಳನ್ನು ತೆರವುಗೊಳಿಸಿ ಕೂಡ್ಲು ಗ್ರಾಮದ ಸರ್ವೆ ನಂ.148 ರಲ್ಲಿ ನಿರ್ಮಿಸಿರುವ ಮನೆಗಳಿಗೆ ಸ್ಥಳಾಂತರಿಸಲು ತಗಲುವ ವೆಚ್ಚ ರೂ.11.05.000/- ಗಳ ವೆಚ್ಚವನ್ನು ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆಯಿಂದ ಭರಿಸಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಆಕುಕ 192 ಎಂಎಂಸಿ 2013, ಬೆಂಗಳೂರು, ದಿನಾಂಕ 17.01.2014</u>

ಗೌರವಾನ್ವಿತ ರಾಜ್ಯ ಉಚ್ಚ ನ್ಯಾಯಾಲಯವು ದಿನಾಂಕ 15.07.2013 ರಂದು ನೀಡಿದ ಆದೇಶದ ಮೇರೆಗೆ ಹಾಗೂ ದಿನಾಂಕ 28.06.2013 ರ ಸಭೆಯಲ್ಲಿ ಕೈಗೊಂಡ ನಿರ್ಣಯದನ್ವಯ ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ಬೆಂಗಳೂರು ಈ ಸಂಸ್ಥೆಯ ಆವರಣದಲ್ಲಿರುವ ಗುಡಿಸಲು ವಾಸಿಗಳನ್ನು ತೆರವುಗೊಳಿಸಿ ಕೂಡ್ಲು ಗ್ರಾಮದ ಸರ್ವೆ ನಂ.148 ರಲ್ಲಿ ನಿರ್ಮಿಸಿರುವ ಮನೆಗಳಿಗೆ ಸ್ಥಳಾಂತರಿಸಲು ತಗಲುವ ವೆಚ್ಚ ಒಟ್ಟು ರೂ.22,10,000/- ಗಳ ಪೈಕಿ ಎಸ್.ಡಿ.ಎಸ್. ಕ್ಷಯರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್‌ಗಾಂಧಿ ಎದೆರೋಗಗಳ ಸಂಸ್ಥೆಯಿಂದ ರೂ.11.05.000/- ಗಳ (ಹನ್ನೊಂದು ಲಕ್ಷದ ಐದು ಸಾವಿರ ರೂಪಾಯಿಗಳು ಮಾತ್ರ) ವೆಚ್ಚವನ್ನು ಭರಿಸಲು ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ.

ಮುಂದುವರಿದು, ಸದರಿ ಕೊಳಗೇರಿ ನಿವಾಸಿಗಳ ಸ್ಥಳಾಂತರಕ್ಕೆ ಸಂಬಂಧಿಸಿದಂತೆ ದಿನಾಂಕ 28.06.2013 ರ ಸಭೆಯಲ್ಲಿ ಕೈಗೊಂಡ ನಿರ್ಣಯದನ್ವಯ ಸದರಿ ಸ್ಥಳಾಂತರ ಕಾರ್ಯಕ್ಕೆ ತಗಲುವ ಮೊತ್ತ ರೂ.22,10,000/- ಗಳ ಪೈಕಿ ಇನ್ನುಳಿದ ರೂ.11,05,000/- ಗಳನ್ನು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಭರಿಸುವಂತೆ ತಿಳಿಸಲು ಸೂಚಿಸಲಾಗಿದೆ.

ಈ ವೆಚ್ಚವನ್ನು 2013-14 ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4210-01-110-1-10-386 ಯೋಜನೆ ಅಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಕಾಮಗಾರಿಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು, 2000ರ ಪ್ರಕಾರ ನಿರ್ವಹಿಸತಕ್ಕದ್ದು.

1958 ಕರ್ನಾಟಕ ಆರ್ಥಿಕ ಸಂಹಿತೆಯ 161ನೇ ಅನುಚ್ಛೇದದಡಿ ಯಾವ ಉದ್ದೇಶಕ್ಕಾಗಿ ಮೇಲ್ಕಂಡ ಅನುದಾನವನ್ನು ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸತಕ್ಕದ್ದು. ನಿಗದಿತ ನಮೂನೆಯಲ್ಲಿ ಅನುದಾನದ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ, ಮಹಾಲೇಖಪಾಲರಿಗೆ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು.

ತತ್ಸಂಬಂಧಿತ ಅನುದಾನದ ಬಿಲ್ಲುಗಳಿಗೆ ಸರ್ಕಾರದ ಉಪ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ಇವರು ಮೇಲು ರುಜು ಮಾಡಲು ಅಧಿಕೃತಗೊಳಿಸಲಾಗಿದೆ.

ಸಂಬಂಧಿಸಿದ ಸಂಸ್ಥೆಯ ನಿರ್ದೇಶಕರು ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಡ್ರಾ ಮಾಡುವ ಬಿಲ್ಲುಗಳಿಗೆ ಸಕ್ಷಮ ಪ್ರಾಧಿಕಾರದ ಮೇಲು ರುಜು ಪಡೆದು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇಲ್ಲಿ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಟಿಪ್ಪಣಿ ಸಂಖ್ಯೆ:ಆಕುಕ 1596 ಆಂಆಸ 2013, ದಿನಾಂಕ 19.11.2013 ರಲ್ಲಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1268 ವೆಚ್ಚ-5/2013, ದಿನಾಂಕ 27.12.2013 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ.ಆರ್.ನಾಗಭೂಷಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ) / (ಲೆಕ್ಕಪರಿಶೋಧನೆ 1 ಮತ್ತು 2), ಕರ್ನಾಟಕ, ಬೆಂಗಳೂರು-560001.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560009.
3. ನಿರ್ದೇಶಕರು, ಖಜಾನೆ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು.
4. ನಿರ್ದೇಶಕರು, ಎಸ್.ಡಿ.ಎಸ್.ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ಬೆಂಗಳೂರು-560029
5. ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ನಂ.55, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560020.
6. ಆಂತರಿಕ ಆರ್ಥಿಕ ಸಲಹೆಗಾರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
8. ಖಜಾನಾ ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 4 & 5), ವಿಧಾನ ಸೌಧ, ಬೆಂಗಳೂರು.
10. ಯೋಜನಾಧಿಕಾರಿಗಳು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-560009
11. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿಗಳು

1. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ) ವಿಕಾನ ಸೌಧ, ಬೆಂಗಳೂರು.